ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ
(ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೆ ಒಳಪಟ್ಟಿದೆ)
ಕಂಪನಿ ಕಛೇರಿ,
ನವನಗರ, ಪಿ.ಬಿ.ರೋಡ, ಹುಬ್ಬಳ್ಳಿ - 580 025.
Tel: +91836 2324196

HUBLI ELECTRICITY SUPPLY COMPANY LIMITED
(Wholly owned Govt. of Karnataka undertaking)
Company Office,
Navanagar, P.B.Road, Hubballi - 580025
E-mail Id: eehrd.hescom@gmail.com

Corporate Identity Number (CIN): U31401KA2002SGC030437

ಕ್ರ.ಸಂ:ಹೆಸ್ಕಾಂ/ಪ್ರ.ವ್ಯ(ಆ&ಮಾ.ಸಂ.ಅ)/ಇಇ(ಮಾ.ಸಂ.ಅ&ಕೈ.ತ.ಕೇಂ)/23-24/ 415-1182      ದಿ: 8 JUN 2023

## ಕಛೇರಿ ಜ್ಞಾಪನಾ ಪತ್ರ

ವಿಷಯ: ಮಾಪಕ ಓದುಗ/ ಮೇಲ್ವಿಚಾರಕ/ ಸಹಾಯಕ ಉಗ್ರಾಣ ಪಾಲಕ/ ಆಪರೇಟರ್ (ತಾಂತ್ರಿಕವಲ್ಲದ) ಹುದ್ದೆಯಿಂದ ಕಿರಿಯ ಇಂಜಿನಿಯರರಾಗಿ ಬಡ್ತಿ ಹೊಂದಲು ಪದೋನ್ನತಿ ಪೂರ್ವ ತರಬೇತಿ (ತಂಡ-21) ಯನ್ನು ಆಯೋಜಿಸುವ ಕುರಿತು.

ಉಲ್ಲೇಖ: ಅನುಮೋದಿತ ಪಿ. ಎಲ್. ಒ ಕಡತ ಸಂಖ್ಯೆ: 2500/13-14 ಪ್ಯಾರಾ ಸಂಖ್ಯೆ: 378 ದಿನಾಂಕ: 07.06.2023.

******

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಅರ್ಹ ಮಾಪಕ ಓದುಗ/ ಮೇಲ್ವಿಚಾರಕ/ ಆಪರೇಟರ್/ ಸಹಾಯಕ ಉಗ್ರಾಣ ಪಾಲಕರುಗಳಿಗೆ (ತಾಂತ್ರಿಕವಲ್ಲದ) ಕಿರಿಯ ಇಂಜಿನಿಯರ ಹುದ್ದೆಗೆ ಪದೋನ್ನತಿ ನೀಡುವ ಪೂರ್ವದಲ್ಲಿ ಕ.ವಿ.ಮಂ. ನೇಮಕಾತಿ ಮತ್ತು ಬಡ್ತಿ ನಿಯಮಾವಳಿಗಳು 1999 ರ ಪ್ರಕಾರ ಪದೋನ್ನತಿ ಪೂರ್ವ ತರಬೇತಿಯು ಕಡ್ಡಾಯವಾಗಿರುತ್ತದೆ.

ಆದ್ದರಿಂದ ಅರ್ಹ ಅಭ್ಯರ್ಥಿಗಳಿಗೆ ದಿನಾಂಕ: **15.06.2023** ರಿಂದ **20.07.2023** ರವರೆಗೆ (ತಂಡ-21) ಒಟ್ಟು 28 ದಿನಗಳ (Working Days) ಪದೋನ್ನತಿ ಪೂರ್ವ ತರಬೇತಿಯನ್ನು ಕೈಗಾರಿಕಾ ತರಬೇತಿ ಕೇಂದ್ರ, ಹು.ವಿ.ಸ.ಕಂ.ನಿ., ಕಾರವಾರ ರಸ್ತೆ, ಹುಬ್ಬಳ್ಳಿಯಲ್ಲಿ ಆಯೋಜಿಸಲು ಆದೇಶಿಸಲಾಗಿದೆ. ಕಾರ್ಯ ಮತ್ತು ಪಾಲನಾ ವೃತ್ತ ಮಟ್ಟದ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಸದರಿ ತರಬೇತಿಗೆ ನಿಯೋಜಿಸಬೇಕಾದ ವೃತ್ತವಾರು ಅಭ್ಯರ್ಥಿಗಳ ಸಂಖ್ಯೆ ಈ ಕೆಳಗಿನಂತಿರುತ್ತದೆ.

| ಅ. ಸಂ. | ವೃತ್ತ | ಜೇಷ್ಠತಾ ಪಟ್ಟಿ ಆಧಾರದ ಮೇಲೆ ನಿಯೋಜಿಸಬೇಕಾದ ಅರ್ಹ ಅಭ್ಯರ್ಥಿಗಳ ಸಂಖ್ಯೆ |
|---|---|---|
| 1 | ಹುಬ್ಬಳ್ಳಿ | 15 |
| 2 | ಹಾವೇರಿ | 04 |
| 3 | ಶಿರಸಿ | 05 |
| 4 | ಬೆಳಗಾವಿ | 04 |
| 5 | ಚಿಕ್ಕೋಡಿ | 04 |
| 6 | ಬಾಗಲಕೋಟ | 04 |
| 7 | ವಿಜಯಪುರ | 04 |
| | ಒಟ್ಟು | **40** |

ಆಯಾ ವೃತ್ತ ಕಛೇರಿಯಿಂದ ಕಛೇರಿ ಜ್ಞಾಪನಾ ಪತ್ರದ ಮೂಲಕ ಮೇಲೆ ಸೂಚಿಸಿರುವ ಸಂಖ್ಯೆಗಳಷ್ಟು ಅರ್ಹ ಅಭ್ಯರ್ಥಿಗಳನ್ನು ಜೇಷ್ಠತಾ ಪಟ್ಟಿ ಆಧಾರದ ಮೇಲೆ ತರಬೇತಿಗೆ ನಿಯೋಜಿಸುವುದು.

**ತರಬೇತಿಗೆ ಆಗಮಿಸುವ ಶಿಕ್ಷಣಾರ್ಥಿಗಳಿಗೆ ಸೂಚನೆ :**

1) ದಿನಾಂಕ **15.06.2023** ರಂದು ಬೆಳಿಗ್ಗೆ **09:30** ಗಂಟೆಗೆ ಕೈಗಾರಿಕಾ ತರಬೇತಿ ಕೇಂದ್ರ, ಹು.ವಿ.ಸ.ಕಂ.ನಿ., ಕಾರವಾರ ರಸ್ತೆ, ಹುಬ್ಬಳ್ಳಿ ಕಛೇರಿಯಲ್ಲಿ ವರದಿ ಮಾಡಿಕೊಳ್ಳುವುದು.
2) ಹೆಸ್ಕಾಂ ಕಂಪನಿಯ ಗುರುತಿನ ಚೀಟಿಯನ್ನು ಧರಿಸುವುದು ಕಡ್ಡಾಯವಾಗಿರುತ್ತದೆ.
3) ಶಿಕ್ಷಣಾರ್ಥಿಗಳು ಸಮವಸ್ತ್ರ (Uniform) ದಲ್ಲಿ ಇರತಕ್ಕದು.
4) ಇತ್ತೀಚೆಗೆ ತೆಗೆಸಲಾದ ಪಾಸಪೋರ್ಟ ಗಾತ್ರದ ಎರಡು ಭಾವ ಚಿತ್ರಗಳನ್ನು ತರಬೇತಿಗೆ ವರದಿ ಮಾಡಿಕೊಳ್ಳುವ ಸಮಯದಲ್ಲಿ ಕಡ್ಡಾಯವಾಗಿ ಸಲ್ಲಿಸಬೇಕು.
5) ಶಿಕ್ಷಣಾರ್ಥಿಗಳು ತರಗತಿಯೊಳಗೆ ಮೊಬೈಲ್‌ಗಳನ್ನು ತೆಗೆದುಕೊಂಡು ಹೋಗುವಂತಿಲ್ಲ.
6) ತಂಬಾಕು, ಮದ್ಯಪಾನ ಮತ್ತು ಧೂಮಪಾನ ಸೇವನೆಯನ್ನು ತರಬೇತಿ ಕೆಂದ್ರದಲ್ಲಿ ನಿಷೇಧಿಸಿದೆ.
7) ಶಿಕ್ಷಣಾರ್ಥಿಗಳು ತರಬೇತಿ ಕೇಂದ್ರದ ಸ್ವಚ್ಛತೆಯನ್ನು ಕಡ್ಡಾಯವಾಗಿ ಕಾಪಾಡತಕ್ಕದ್ದು
8) ಔಷಧೋಪಚಾರ (Under Medication) ದಲ್ಲಿರುವ ಶಿಕ್ಷಣಾರ್ಥಿಗಳು ಅವಶ್ಯಕ ಔಷಧಿಗಳನ್ನು ತಪ್ಪದೇ ತರುವುದು.
9) ತರಬೇತಿಯ ಅವಧಿಯಲ್ಲಿ ಶಿಕ್ಷಣಾರ್ಥಿಗಳು ಯಾವುದೇ ರಜೆಗಳನ್ನು ಪಡೆಯಲು ಅವಕಾಶವಿರುವುದಿಲ್ಲ.
10) ತರಬೇತಿಯ ಅವಧಿಯಲ್ಲಿ ಗೈರು ಹಾಜರಾಗುವ ಶಿಕ್ಷಣಾರ್ಥಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.
11) ತರಬೇತಿಗೆ ಹಾಜರಾಗುವ ಶಿಕ್ಷಣಾರ್ಥಿಗಳಿಗೆ ಮಧ್ಯಾಹ್ನದ ಊಟ ಹಾಗೂ ಎರಡು ಬಾರಿ ಚಹಾದ ವ್ಯವಸ್ಥೆ ಇರುತ್ತದೆ. ವಸತಿಯ ವ್ಯವಸ್ಥೆಯನ್ನು ಶಿಕ್ಷಣಾರ್ಥಿಗಳೇ ಮಾಡಿಕೊಳ್ಳುವುದು.
12) ತರಬೇತಿಯ ವೇಳಾಪಟ್ಟಿ ಈ ಕೆಳಗಿನಂತಿರುತ್ತದೆ.
    I. ಪ್ರತಿ ದಿನ ತರಬೇತಿ ಕೇಂದ್ರದಲ್ಲಿ ಮುಂಜಾನೆ 10:15 ಕ್ಕೆ ತರಬೇತಿ ಕೊಠಡಿಯಲ್ಲಿ ಹಾಜರಿರಬೇಕು.
    II. ದಿನದ ಮೊದಲ ತರಗತಿಯ ಅವಧಿ: ಮುಂಜಾನೆ 10:30 ರಿಂದ ಮಧ್ಯಾಹ್ನ 1:30 ರವರೆಗೆ
    III. ದಿನದ ಎರಡನೇಯ ತರಗತಿಯ ಅವಧಿ: ಮಧ್ಯಾಹ್ನ 2:30 ರಿಂದ ಸಾಯಂಕಾಲ 5:30 ರವರೆಗೆ
    IV. ಮಧ್ಯಾಹ್ನದ ಊಟದ ಅವಧಿ: 1:30 ರಿಂದ 2:30 ರವರೆಗೆ
    V. ಚಹಾದ ಅವಧಿ: ಮುಂಜಾನೆ 12:00 ರಿಂದ 12:15 ರವರೆಗೆ ಹಾಗೂ ಸಾಯಂಕಾಲ 4:00 ರಿಂದ 4:15 ರವರೆಗೆ

**ತರಬೇತಿಯ ಅವಧಿಯಲ್ಲಿ ಶಿಕ್ಷಣಾರ್ಥಿಗಳು ಸಮಯ ಪಾಲನೆ ಮಾಡುವುದು.**

08.06.23
ಪ್ರಧಾನ ವ್ಯವಸ್ಥಾಪಕರು,
ಆ. ಮತ್ತು ಮಾ.ಸಂ.ಅ.,

08/06/23 07/06/23

**ಪ್ರತಿಗಳು:**

1. ಮುಖ್ಯ ಇಂಜಿನಿಯರರು(ವಿ), ವಲಯ ಕಛೇರಿ, ಹು.ವಿ.ಸ.ಕಂ.ನಿ., ಹುಬ್ಬಳ್ಳಿ/ಬೆಳಗಾವಿ
2. ಅಧೀಕ್ಷಕ ಇಂಜಿನಿಯರರು(ವಿ), ಕಾರ್ಯ ಮತ್ತು ಪಾಲನಾ ವೃತ್ತ ಹು.ವಿ.ಸ.ಕಂ.ನಿ., ಹುಬ್ಬಳ್ಳಿ/ ಹಾವೇರಿ/ ಶಿರಸಿ/ ಬೆಳಗಾವಿ/ ಚಿಕ್ಕೋಡಿ/ ವಿಜಯಪೂರ/ ಬಾಗಲಕೋಟ ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಕಾರ್ಯನಿರ್ವಾಹಕ ಇಂಜಿನಿಯರರು(ವಿ), ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹೆಸ್ಕಾಂ, ಹುಬ್ಬಳ್ಳಿ ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಲೆಕ್ಕಾಧಿಕಾರಿ (ಆಂ.ಪ), ಕಾರ್ಯ ಮತ್ತು ಪಾಲನಾ ಗ್ರಾಮೀಣ ವಿಭಾಗ, ಹೆಸ್ಕಾಂ, ಹುಬ್ಬಳ್ಳಿ ಇವರ ಮಾಹಿತಿಗಾಗಿ
ಮಹಾ ಕಡತ/ ಕಛೇರಿ ಪ್ರತಿ